ಇ) ಪ್ರಸಕ್ತ ಸಾಲಿನಲ್ಲಿ ಇತರೆ ಲೆಕ್ಕ ಶೀರ್ಷಿಕೆಯಡಿಯಲ್ಲಿ ಈ ರಸ್ತೆಗೆ ಅನುದಾನ ಬಿಡುಗಡೆ ಮಾಡುವ ಬಗ್ಗೆ ಕ್ರಮ ಕೈಗೊಳ್ಳಲಾಗುವುದು.

466 (790) ಶ್ರೀ ಶಿವಶಂಕರ್ ರೆಡ್ಡಿ ಎನ್.ಹೆಚ್. (ಗೌರಿಬಿದನೂರು) :– ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗೌರಿಬಿದನೂರು ಪಟ್ಟಣದ ಹೊರವಲಯದಲ್ಲಿ ಸುಮಾರು ಅಂದಾಜು ರೂ.6.00 ಕೋಟಿ ರೂ.ಗಳ ಎರಡನೇ ಹಂತದ ಬೈಪಾಸ್ ಕಾಮಗಾರಿಯನ್ನು ಮಾಡಲು ಕಳೆದ 5–6 ವರ್ಷಗಳಿಂದ ಸರ್ಕಾರಕ್ಕೆ ನಿವೇದಿಸಿಕೊಂಡರೂ ಸಹ ಕಾಮಗಾರಿಯನ್ನು ಗಂಭೀರವಾಗಿ ಪರಿಗಣಿಸಿ ಪೂರ್ತಿಗೊಳ್ಳದೇ ಇರಲು ಕಾರಣವೇನು;

ಆ) ಈ ಬೈಪಾಸ್ ಕಾಮಗಾರಿಯನ್ನು ಕೂಡಲೇ ಕೈಗೆತ್ತಿಕೊಂಡು ಪೂರ್ಣಗೊಳಿಸಿ ಈ ಭಾಗದ ಜನತೆಗೆ ವಾಹನಗಳ ಸಂಚಾರಕ್ಕೆ ಅನುಕೂಲ ಮಾಡಿಕೊಡಲಾಗುವುದೇ?

ಶ್ರೀ ಹೆಚ್.ಡಿ. ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು):

ಅ) ಗೌರಿಬಿದನೂರು ಪಟ್ಟಣದ ಹೊರವಲಯದಲ್ಲಿ ಬೈಪಾಸ್ ರಸ್ತೆ ನಿರ್ಮಿಸಲು ಹೆಚ್ಚಿನ ಅನುದಾನದ ಅವಶ್ಯಕತೆ ಇದ್ದುದರಿಂದ ಅನುದಾನದ ಕೊರತೆಯಿಂದಾಗಿ ಇದುವರೆವಿಗೂ ಕಾಮಗಾರಿಯನ್ನು ಕೈಗೊಳ್ಳಲಾಗಿರುವುದಿಲ್ಲ.

ಆ) 2007–08ನೇ ಸಾಲಿನ ಆಯವ್ಯಯದಲ್ಲಿ ಲೆಕ್ಕ ಶೀರ್ಷಿಕೆ 5054 ಯೋಜನೆ ಅಡಿಯಲ್ಲಿ ಅನುದಾನದ ಲಭ್ಯತೆಯನ್ನು ಆಧರಿಸಿ ಸದರಿ ರಸ್ತೆಯನ್ನು ಅಭಿವೃದ್ಧಿಪಡಿಸಲು ಕ್ರಮ ಕೈಗೊಳ್ಳಲಾಗುವುದು.

467 (791) ಶ್ರೀ ಶಿವಶಂಕರ್ ರೆಡ್ಡಿ ಎನ್.ಹೆಚ್. (ಗೌರಿಬಿದನೂರು) :– ಮಾನ್ಯ ಪೌರಾಡಳಿತ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗೌರಿಬಿದನೂರು ಪಟ್ಟಣದಲ್ಲಿ ಕಳೆದ 20 ವರ್ಷಗಳಿಂದ ಎಷ್ಟು ಹೊಸ ಬಡಾವಣೆಗಳು ಸೃಷ್ಟಿಯಾಗಿದೆ (ಅವುಗಳ ವಿವರ ಒದಗಿಸುವುದು);

ಆ) ಈ ಹೊಸ ಬಡಾವಣೆಯಲ್ಲಿ ಎಷ್ಟು ಎಷ್ಟು ಹೊಸ ನಿವೇಶನಗಳನ್ನು ನಿರ್ಮಿಸಲಾಗಿದೆ (ವಿವರ ನೀಡುವುದು);

ಇ) ಈ ಬಡಾವಣೆಗಳಲ್ಲಿ ಎಷ್ಟು ನಿವೇಶನಗಳು ಸಾರ್ವಜನಿಕರ ಉಪಯೋಗಕ್ಕೆ ಕಾಯ್ದಿರಿಸಲಾಗಿದೆ; ಅವುಗಳಲ್ಲಿ ಎಷ್ಟು ಕಬಳಿಕೆಯಾಗಿವೆ (ವಿವರ ಒದಗಿಸುವುದು)

ಈ) ಸಾರ್ವಜನಿಕರ ಉಪಯೋಗಕ್ಕೆ ಕಾಯ್ದಿರಿಸಲಾದ ನಿವೇಶನಗಳ ಜಾಗಕ್ಕೆ ಗಮನ ಸೆಳೆಯುವ ರೀತಿಯಲ್ಲಿ ಪುರಸಭೆಗಳು ನಾಮಫಲಕಗಳನ್ನು ಹಾಕದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಉ) ಇಲ್ಲವಾದರೆ ಕೈಗೊಳ್ಳುವ ಕ್ರಮವೇನು?

ಶ್ರೀ ಆಲಂಗೂರು ಶ್ರೀನಿವಾಸ (ಪೌರಾಡಳಿತ ಸಚಿವರು) :

ಅ) ಕಳೆದ 20 ವರ್ಷಗಳಿಂದ 79 ಹೊಸ ಬಡಾವಣೆಗಳು ಪುರಸಭೆಯಲ್ಲಿ ದಾಖಲೆಯಾಗಿವೆ. ವಿವರಗಳನ್ನು ಮಾನ್ಯ ಸದಸ್ಯರಿಗೆ ಪ್ರತ್ಯೇಕವಾಗಿ ನೀಡಲಾಗುವುದು.

ಆ) ಈ ಹೊಸ ಬಡಾವಣೆಗಳಲ್ಲಿ ಒಟ್ಟು 1849 ನಿವೇಶನಗಳನ್ನು ನಿರ್ಮಿಸಲಾಗಿದೆ. ವಿವರಗಳನ್ನು ಮಾನ್ಯ ಸದಸ್ಯರಿಗೆ ಪ್ರತ್ಯೇಕವಾಗಿ ನೀಡಲಾಗುವುದು.

ಇ) ಸದರಿ ಬಡಾವಣೆಗಳಲ್ಲಿ ಒಟ್ಟು 97 ನಿವೇಶನಗಳನ್ನು ಸಾರ್ವಜನಿಕರ ಉಪಯೋಗಕ್ಕೆ ಕಾಯ್ದಿರಿಸಲಾಗಿದೆ. ಕಬಳಿಕೆಯಾಗಿರುವ ಬಗ್ಗೆ ಸರ್ವೆ ನಡೆಸಲಾಗುತ್ತಿದೆ.

ಈ) ಬಂದಿದೆ.

ಉ) ಅಗತ್ಯ ಕ್ರಮ ಕೈಗೊಳ್ಳಲಾಗುವುದು.

469 (877) ಶ್ರೀ ಸಿದ್ದು ಸವದಿ (ಜಮಖಂಡಿ) :- ಮಾನ್ಯ ಪೌರಾಡಳಿತ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ನಗರಸಭೆ, ಪುರಸಭೆಗಳಿಗೆ ಜಾರಿಗೆ ತಂದಿರುವ ಸ್ವಯಂ ಘೋಷಿತ ಆಸ್ತಿ ತೆರಿಗೆಯ ನಿಯಮಾವಳಿಗಳೇನು;

ಆ) ಜಮಖಂಡಿ ಪುರಸಭೆಗೆ ರಾಜ್ಯದಲ್ಲಿಯ ಎಲ್ಲಾ ಪುರಸಭೆ ಮತ್ತು ನಗರಸಭೆಗಳಿಗಿಂತ ಹೆಚ್ಚಿನ ತೆರಿಗೆ ವಿಧಿಸಿದ್ದು ನಿಜವೇ;

ಇ) ತೆರಿಗೆ ಹೆಚ್ಚಾಗಿದ್ದರಿಂದ ನಾಲ್ಕು ವರ್ಷಗಳಿಂದ ನಗರದಲ್ಲಿ ಸಾರ್ವಜನಿಕರು ತೆರಿಗೆ ತುಂಬದೇ ನ್ಯಾಯಾಲಯಕ್ಕೆ ಮೊರೆ ಹೋಗಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ;